# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 813
ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ಕೆ.ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 26-12-2022
ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

*****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣವಾದ ಮುಳ್ಳಯ್ಯನಗಿರಿಯಿಂದ ದತ್ತಪೀಠಕ್ಕೆ ರೋಪ್‌ವೇ ನಿರ್ಮಾಣ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ; | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 338ರಲ್ಲಿ ಚಿಕ್ಕಮಗಳೂರಿನ ಮುಳ್ಳಯ್ಯನಗಿರಿ ದತ್ತಪೀಠ ಬೆಟ್ಟದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ರೋಪ್ ವೇ ಅನ್ನು ನಿರ್ಮಾಣ ಮಾಡಲು ಕೇಂದ್ರ ಸರ್ಕಾರದ "ಪರ್ವತಮಾಲಾ" ಯೋಜನೆಯಡಿ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂಬುದಾಗಿ ಘೋಷಿಸಲಾಗಿರುತ್ತದೆ.<br><br>ಅದರಂತೆ, ಕೇಂದ್ರ ಸರ್ಕಾರದ ಪರ್ವತಮಾಲಾ ಯೋಜನೆಯಡಿ ಪರಿಗಣಿಸಲು, ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಪ್ರವಾಸಿ ತಾಣವು ಒಳಗೊಂಡಂತೆ ಒಟ್ಟಾರೆ 15 ತಾಣಗಳಲ್ಲಿ ರೋಪ್ ವೇ ಅಳವಡಿಸಲು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಮಂತ್ರಾಲಯಕ್ಕೆ ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ, ಸದರಿ ಯೋಜನೆಯಡಿ ಚಿಕ್ಕಮಗಳೂರಿನ ಮುಳ್ಳಯ್ಯನಗಿರಿ ದತ್ತಪೀಠ ಬೆಟ್ಟವು ಆಯ್ಕೆಗೊಂಡಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | ಮುಳ್ಳಯ್ಯನಗಿರಿಯಿಂದ ದತ್ತಪೀಠಕ್ಕೆ ರೋಪ್‌ವೇ ನಿರ್ಮಾಣ ಮಾಡಲು ಮೊದಲ ಹಂತದ ಅನುದಾನ ಬಿಡುಗಡೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಬಿಡುಗಡೆಯಾದ ಅನುದಾನವೆಷ್ಟು; | ಉದ್ಭವಿಸುವುದಿಲ್ಲ. |
| ಈ) | ಕಾಮಗಾರಿ ಪ್ರಾರಂಭಿಸಲು ಅನುದಾನ ಬಿಡುಗಡೆ ಮಾಡದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; (ವಿವರ ನೀಡುವುದು) | |
| ಉ) | ಮುಳ್ಳಯ್ಯನಗಿರಿಯಿಂದ ದತ್ತಪೀಠಕ್ಕೆ ರೋಪ್‌ವೇ ನಿರ್ಮಾಣ ಮಾಡಲು ಡಿ.ಪಿ.ಆರ್. ಅಂದಾಜುಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೇ? (ವಿವರ ನೀಡುವುದು) | |

ಸಂಖ್ಯೆ: **TOR 354 TDV 2022**

(ಆನಂದ್ ಸಿಂಗ್)
ಪ್ರವಾಸೋದ್ಯಮ,
ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು